ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1513 (1831)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಕಾಲ್ಪನಿಕ ವೇತನ ಬಡ್ತಿ ಸಮಸ್ಯೆ ಕುರಿತು

(ಅ) ಅನುದಾನಿತ ಸಂಸ್ಥೆಗಳ ಶಿಕ್ಷಕ, ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು(ಕಾಲ್ಪನಿಕ ವೇತನ ಬಡ್ತಿ) ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ;

(ಆ) ಕಾಲ್ಪನಿಕ ವೇತನ ಬಡ್ತಿ ಜಾರಿಗೊಳಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಕಾಲ್ಪನಿಕ ವೇತನ ಬಡ್ತಿ ನೀಡುವ ಕುರಿತು ಪರಿಶೀಲನೆ ನಡೆಸಲು ಸಮಿತಿ ರಚನೆ ಯಾವಾಗ ಮಾಡಲಾಯಿತು ; (ಸಮಿತಿಯ ಸಂಪೂರ್ಣ ವಿವರವನ್ನು ಒದಗಿಸುವುದು)

(ಈ) ಸಮಿತಿಯ ವರದಿಯ ಪ್ರಕಾರ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲು ಸರ್ಕಾರಕ್ಕೆ ತಗಲುವ ವೆಚ್ಚವೆಷ್ಟು ;

(ಉ) ಕಾಲ್ಪನಿಕ ವೇತನ ಬಡ್ತಿ ನೀಡಲು ಬೇಕಾಗುವ ಅಗತ್ಯ ಅನುದಾನವನ್ನು 2021-22ರ ಬಜೆಟ್‌ನಲ್ಲಿ ಮೀಸಲಿಟ್ಟು. ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಮುಂದಾಗುವುದೇ; ಬಜೆಟ್‌ನಲ್ಲಿ ಅನುದಾನವನ್ನು ಮೀಸಲಿಡಲು ಸಾಧ್ಯವಾಗದಿದ್ದಲ್ಲಿ, ಇದಕ್ಕೆ ಕಾರಣವೇನು ; ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಮುಂದಾಗುವುದು ?